ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

ಪತ್ರಿಕಾ ತುಣುಕುಗಳು

**PAPER CLIPPINGS**

4

ಇಲಾಖೆ / ವಿಷಯ : DEPARTMENT / SUBJECT: ಪ್ರವಾಹ

ಪತ್ರಿಕೆಯ ಹೆಸರು : NAME OF THE NEWS PAPER: ಉದಯವಾಣಿ ಹುಬ್ಬಳ್ಳಿ ದಿನಾಂಕ : DATE :18/10/20

# ಭೀಮಾ ಸಂತ್ರಸ್ತರ ರಕ್ಷಣೆಗೆ ಬಂದ ಸೇನೆ

ಉವಾ 18/10/20

## ಸಿಕಂದರಾಬಾದ್‌ನಿಂದ ಶನಿವಾರ ರಾತ್ರಿ ಬಂದಿಳಿದ 98 ಯೋಧರ ಪಡೆ



- ಇತಿಹಾಸದಲ್ಲೇ ಮೊದಲ ಬಾರಿಗೆ ಭೀಮಾ ಬ್ಯಾರೇಜ್‌ನ 29 ಗೇಟ್‌ಗಳ ಮೂಲಕ ನೀರು ಬಿಡುಗಡೆ
- 20 ಸಾವಿರಕ್ಕೂ ಹೆಚ್ಚು ಜನರನ್ನು ಸುರಕ್ಷಿತ ಪ್ರದೇಶಗಳಿಗೆ ಸ್ಥಳಾಂತರ
- 157 ಗ್ರಾಮಗಳಿಗೆ ಜಲ ಕಂಟಕ

**ಹುಬ್ಬಳ್ಳಿ:** ಕಲಬುರಗಿ ಜಿಲ್ಲೆಯಲ್ಲಿ ಭೀಮೆಯ ಅಟ್ಟಹಾಸ ಹೆಚ್ಚಾಗಿದ್ದು ಪ್ರವಾಹದಿಂದ ಜನರನ್ನು ರಕ್ಷಿಸಲು ಭಾರತೀಯ ಸೇನೆ ಶನಿವಾರ ಬಂದಿಳಿದಿದೆ. ಸಿಕಂದರಾಬಾದ್‌ನಿಂದ ಮೇಜರ್ ಮಾರ್ಟಿನ್ ಅರವಿಂದ ಅವರ ನೇತೃತ್ವದ 98 ಜನ ಯೋಧರ ತಂಡ ಆಗಮಿಸಿದೆ.

ಮೂರು ತಂಡಗಳಾಗಿ ಅಫಜಲಪೂರ, ಜೇವರ್ಗಿ ಹಾಗೂ ಶಹಾಬಾದ ತಾಲೂಕಿನಲ್ಲಿ ಜನರ ರಕ್ಷಣಾ ಕಾರ್ಯಾಚರಣೆಗೆ ಇಳಿಯಲಿವೆ.

ಮಹಾರಾಷ್ಟ್ರದಿಂದ ದಾಖಲೆ ಪ್ರಮಾಣದಲ್ಲಿ ಭೀಮಾ ನದಿಗೆ ನೀರು ಹರಿಸಲಾಗುತ್ತಿದ್ದು ಶನಿವಾರ ಬರೋಬ್ಬರಿ ಎಂಟು ಲಕ್ಷ ಕ್ಯೂಸೆಕ್ ಹರಿದು ಬಂದಿದೆ. ಅಫಜಲಪುರ ತಾಲೂಕಿನ ಸೊನ್ನ ಬ್ಯಾರೇಜ್ ಬರುವ ಭಾರಿ ಪ್ರಮಾಣದ ನೀರನ್ನು ಅಷ್ಟೇ ಪ್ರಮಾಣದಲ್ಲಿ ನದಿಗೆ ಹರಿಬಿಡಲಾಗುತ್ತಿದ್ದು ನದಿ ಪಾತ್ರದ 157 ಗ್ರಾಮಗಳಿಗೆ ಜಲ ಕಂಟಕ ಎದುರಾಗಿದೆ.

**ಮಹಾ ನೆರೆ:** ಮಳೆ ನಿಂತರೂ 'ಮಹಾ ನೆರೆ'ಗೆ ಭೀಮಾ, ಕೃಷ್ಣಾ ಹಾಗೂ ಕಾಗಿಣಾ ನದಿ ಉಕ್ಕಿ ಹರಿಯುತ್ತಿವೆ. ಭೀಮಾ ನದಿಗೆ 8 ಲಕ್ಷ, ಕೃಷ್ಣಾ ನದಿಗೆ 4.50 ಲಕ್ಷ ಕ್ಯೂಸೆಕ್ ನೀರು ಹರಿದು ಬರುತ್ತಿದ್ದು ಕಲಬುರಗಿ, ರಾಯಚೂರು, ಯಾದಗಿರಿ, ವಿಜಯಪುರ ಜಿಲ್ಲೆಗಳ ನದಿ ತೀರದ ಗ್ರಾಮಗಳಲ್ಲಿ ಪ್ರವಾಹ ಸಂಕಷ್ಟ ಮುಂದುವರೆದಿದೆ.

ಮುನ್ನೆಚ್ಚರಿಕೆ ಕ್ರಮವಾಗಿ ಬೀದರ್ ವಾಯುನೆಲೆಯಲ್ಲಿ ಎರಡು ಹೆಲಿಕಾಪ್ಟರ್‌ಗಳನ್ನು ಸನ್ನದ್ಧ ಸ್ಥಿತಿಯಲ್ಲಿಡಲಾಗಿದೆ. ಇತಿಹಾಸದಲ್ಲೇ ಮೊದಲ ಬಾರಿಗೆ ಭೀಮಾ ಬ್ಯಾರೇಜ್‌ನ 29 ಗೇಟ್‌ಗಳನ್ನು ತೆರೆದು ನದಿಗೆ ನೀರು ಬಿಡಲಾಗುತ್ತಿದ್ದು ಗೇಜ್‌ವೇ ನೀರಿನಲ್ಲಿ ಮುಳುಗಿದ್ದರಿಂದ ನೀರಿನ ಪ್ರಮಾಣವೇ ಲೆಕ್ಕಕ್ಕೆ ಸಿಗುತ್ತಿಲ್ಲ. ಕಲಬುರಗಿ ಜಿಲ್ಲೆಯಲ್ಲಿ 157, ರಾಯಚೂರಿನಲ್ಲಿ 17, ಯಾದಗಿರಿಯಲ್ಲಿ 12, ವಿಜಯಪುರದಲ್ಲಿ 30ಕ್ಕೂ ಹೆಚ್ಚು ಗ್ರಾಮಗಳು ಪ್ರವಾಹಕ್ಕೆ ತುತ್ತಾಗಿವೆ. ಕಲಬುರಗಿಯಲ್ಲಿ 55 ಗ್ರಾಮಗಳು ಅಕ್ಷರಶಃ ಜಲಾವೃತವಾಗಿದ್ದು ಜನತೆ ಕಂಗಾಲಾಗಿದ್ದಾರೆ. ಇದುವರೆಗೆ ನದಿ ತೀರದ 20000ಕ್ಕೂ ಹೆಚ್ಚು ಜನರನ್ನು ಸ್ಥಳಾಂತರಿಸಲಾಗಿದೆ. ಯಾದಗಿರಿ ಜಿಲ್ಲೆಯ 33 ಗ್ರಾಮಗಳಿಗೆ ಸಂಪರ್ಕ ಕಡಿತಗೊಂಡಿದೆ.